ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಬೋಧಕರಿಗೆ ಪದೋನ್ನತಿ ನೀಡುವ ಬಗ್ಗೆ

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

563(663) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಖಾಯಂ ಪೂರ್ಣ ಪರೀಕ್ಷೆ ಘೋಷಣೆಯಾಗದೆ ಬೋಧಕರಿಗೆ ಪದೋನ್ನತಿ ನೀಡಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ವೈದ್ಯಕೀಯ ಸಂಸ್ಥೆಯಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಮಾನ್ಯ ಸಚಿವರ ಅನುಮೋದನೆ ಇಲ್ಲದೇ ಪದೋನ್ನತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)